ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್ ಮಂಜೇಗೌಡ ಇವರು ನಿಯಮ-72ರಡಿ ಪ್ರಸ್ತಾಪಿಸಿರುವ "ಅತಿ ಹೆಚ್ಚು ಅರಣ್ಯ ಪ್ರದೇಶವಿರುವ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಾಗಿದ್ದು, ಆನೆ ಮತ್ತು ಕಾಡು ಪ್ರಾಣಿಗಳಿಂದ ಸಾರ್ವಜನಿಕರಿಗೆ ಮತ್ತು ರೈತರಿಗಾಗುವ ಹಾವಳಿಯನ್ನು ತಪ್ಪಿಸುವ ಹಾಗೂ ತಡೆಗಟ್ಟುವ ಸಲುವಾಗಿ ಸರ್ಕಾರ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚನೆ ಮಾಡಲಾಗಿದೆ. ಆದರೆ ಅತಿ ಹೆಚ್ಚು ಆನೆಗಳಿರುವ ಚಾಮರಾಜನಗರ ಜಿಲ್ಲೆಯನ್ನೇ ಈ ಟಾಸ್ಕ್ ಫೋರ್ಸ್ ಸಮಿತಿಯಿಂದ ಕೈಬಿಡಲಾಗಿದೆ. ಚಾಮರಾಜನಗರ ಜಿಲ್ಲೆ ಶೇಕಡಾ 50 ರಷ್ಟು ಅರಣ್ಯ ಪ್ರದೇಶದಿಂದ ಕೂಡಿದ್ದು, ಸುಮಾರು ಎರಡು ಸಾವಿರಕ್ಕೂ ಹೆಚ್ಚು ಆನೆಗಳು ಈ ಜಿಲ್ಲೆಯ ಕಾಡಿನಲ್ಲಿ ವಾಸಮಾಡುತ್ತಿವೆ. ಹೀಗಾಗಿ ಈ ಜಿಲ್ಲೆಯಲ್ಲಿ ನಿರಂತರವಾಗಿ ವನ್ಯಜೀವಿಗಳ ಮತ್ತು ಮಾನವ ಸಂಘರ್ಷ ಪದೇ ಪದೇ ಉಂಟಾಗುತ್ತಿದೆ. ಆನೆಗಳ ಹಾವಳಿಯಿಂದ ಈ ಎರಡು ಜಿಲ್ಲೆಗಳಲ್ಲಿ ಅನೇಕ ರೈತರು/ಸಾರ್ವಜನಿಕರು ಜೀವ ಕಳೆದುಕೊಂಡಿದ್ದಾರೆ. ಈ ರೀತಿಯ ಸಮಸ್ಯೆಗಳು ಬೇರೆ ಜಿಲ್ಲೆಗಳಲ್ಲೂ ಇದೆ. ಇವೆಲ್ಲವನ್ನು ಅರಿತು ಮಾನ್ಯ ಮುಖ್ಯ ಮಂತ್ರಿಯವರು ಇದಕ್ಕೆ ಶಾಶ್ವತ ಪರಿಹಾರ ನೀಡುವ ಸಲುವಾಗಿ ವಿಶೇಷ ಕಾರ್ಯಪಡೆಯನ್ನು ರಚನೆ ಮಾಡಿದ್ದಾರೆ. ಈ ಕಾರ್ಯಪಡೆಯಲ್ಲಿ ಮೈಸೂರು, ಕೊಡಗು, ಚಿಕ್ಕಮಗಳೂರು, ಹಾಸನ, ಶಿವಮೊಗ್ಗ, ಉತ್ತರ ಕನ್ನಡ ಜಿಲ್ಲೆಗಳನ್ನು ಸೇರಿಸಲಾಗಿದೆ. ಈ ಕಾರ್ಯಪಡೆಯಿಂದ ಚಾಮರಾಜನಗರ ಜಿಲ್ಲೆಯನ್ನೇ ಕೈಬಿಟ್ಟಿರುವುದು ಈ ಜಿಲ್ಲೆಯ ಜನತೆಗೆ, ರೈತರಿಗೆ ಹಾಗೂ ಜನ ಪ್ರತಿನಿಧಿಗಳಿಗೆ ತುಂಬಾ ನೋವನ್ನುಂಟು ಮಾಡಿದೆ. ಸಾರ್ವಜನಿಕರ ಮುಂದೆ ಈ ಜಿಲ್ಲೆಯ ಜನಪ್ರತಿನಿಧಿಗಳು ಭೇಟಿಯಾಗಿ ಸಮಾಧಾನ ಪಡಿಸುವುದು ಕಷ್ಟಸಾಧ್ಯವಾಗಿದೆ. ಜಿಲ್ಲೆಯ ರೈತರು, ಸಾರ್ವಜನಿಕರು ಆಕ್ರೋಶ ಭರಿತರಾಗಿದ್ದಾರೆ: ತಿಂಗಳಲ್ಲಿ 2-3 ಬಾರಿ ಆನೆಗಳಿಂದ ಚಿರತಗಳಿಂದ ಹಾವಳಿಯಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಪ್ರಮುಖವಾಗಿ ಈ ಜಿಲ್ಲೆಯ ಮಹದೇಶ್ವರ ಬೆಟ್ಟದ ಭಾಗದಲ್ಲಿ ಆನೆಗಳ ಹಾವಳಿ ಹೆಚ್ಚಾಗಿದೆ. ಈ ಆನೆಗಳ ಮತ್ತು ಕಾಡು ಪ್ರಾಣಿಗಳ ಹಾವಳಿಯಿಂದ ಜೀವ ಹಾನಿಯ ಜೊತೆಗೆ ರೈತರು ಅವರ ಜಮೀನುಗಳಲ್ಲಿ ಬೆಳೆದ ಬೆಳೆ ಹಾನಿಯ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಾಗುತ್ತಾ ಹೋಗುತ್ತಿದೆ. ಈ ಬಗ್ಗೆ ಎಲ್ಲಾ ಪ್ರಮುಖ ಪತ್ರಿಕೆಗಳಲ್ಲಿ ನಿರಂತರವಾಗಿ ವರದಿಯಾಗುತ್ತಿದ್ದರು, ಸರ್ಕಾರ ಕೈಕಟ್ಟಿಕೊಂಡು ನಿರಾಳವಾಗಿ ವಿಳಂಬ ಧೋರಣೆ ಅನುಸರಿಸುತ್ತಿದೆ. ಇತ್ತ ಈ ಜಿಲ್ಲೆಗೆ ಉಸ್ತುವಾರಿ ಸಚಿವರಿಂದಲೂ ರಕ್ಷಣೆಯ ಮಾತಿಲ್ಲ, ಸರ್ಕಾರದಿಂದಲು ಇಲ್ಲ. ಇನ್ನು ಅಧಿಕಾರಿಗಳನ್ನು ಕೇಳುವ ಹಾಗೆ ಇಲ್ಲ. ಈಗಲೂ ಕಾಲ ಮಿಂಚಿಲ್ಲ. ಈ ಬಗ್ಗೆ ಸರ್ಕಾರ ತನ್ನ ತಪ್ಪನ್ನು ಸರಿಪಡಿಸಿಕೊಂಡು ಸಾರ್ವಜನಿಕರು, ರೈತರು, ದಂಗೆ ಏಳುವ ಮುನ್ನ ಚಾಮರಾಜನಗರ ಜಿಲ್ಲೆಯನ್ನು ಈ ಟಾಸ್ಕ್ ಫೋರ್ಸ್ ವಿಶೇಷ ಕಾರ್ಯಪಡೆಗೆ ಸೇರಿಸಿ ಆನೆಗಳ ಹಾವಳಿ/ಕಾಡು ಪ್ರಾಣಿಗಳ ಹಾವಳಿಂದ ತಡೆಗಟ್ಟಿ, ಜೀವಹಾನಿ ಮತ್ತು ರೈತರ ಜಮೀನಿನಲ್ಲಿ ಬೆಳೆ ಹಾನಿಯಂತಹ ಸಮಸ್ಯೆಗಳನ್ನು ನಿವಾರಣೆ ಮಾಡಿ, ಈ ಜಿಲ್ಲೆಯ ರೈತರು, ಸಾರ್ವಜನಿಕರು ನೆಮ್ಮದಿಯ ಜೀವನ ಸಾಗಿಸಲು ಅನುಕೂಲ ಮಾಡಿಕೊಡಬೇಕಾಗುವ ವಿಷಯದ" ಗಮನ ಸೆಳೆಯುವ ಸೂಚನೆಗೆ ಸನ್ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ.

******

ಇತ್ತೀಚಿನ ದಿನಗಳಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಆನೆ ಸಂರಕ್ಷಿತ ಪ್ರದೇಶಗಳ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಕಾಡಾನೆ ಹಾವಳಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ, ಸರ್ಕಾರ ಪ್ರಸ್ತುತದ ಪರಿಸ್ಥಿತಿಯ ಗಂಭೀರತೆಯನ್ನು ಅವಲೋಕಿಸಿ, ಅದರನ್ವಯ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಸದರಿ ಮೇಲ್ಕಂಡ ಜಿಲ್ಲೆಗೊಂದರಂತೆ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡಂತೆ ಜಿಲ್ಲಾ Elephant Task Force ಅನ್ನು ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ: 21.11.202ರಲ್ಲಿ ರಚಿಸಿ

...2

ಆದೇಶಿಸಲಾಗಿದೆ. ಸದರಿ ಆದೇಶದಲ್ಲಿ ಚಾಮರಾಜನಗರ ಜಿಲ್ಲೆಯು ಸೇರ್ಪಡೆಯಾಗಿಲ್ಲದಿದ್ದಾಗ್ಯೂ ಚಾಮರಾಜನಗರ ಜಿಲ್ಲೆಯು ಮೈಸೂರು ಆನೆ ಸಂರಕ್ಷಿತ ಪ್ರದೇಶದಲ್ಲಿ ಸೇರ್ಪಡೆಯಾಗಿದ್ದು, ಮಾನವ-ಆನೆ ಸಂಘರ್ಷ ನಿವಾರಣೆಗೆ ಹಲವಾರು ಕ್ರಮಗಳನ್ನು ಕೇಂದ್ರ ಪುರಸ್ಕೃತ ಆನೆ ಯೋಜನೆ , ಕೇಂದ್ರ ಪುರಸ್ಕೃತ ಹುಲಿ ಯೋಜನೆ ಹಾಗೂ ರಾಜ್ಯ ವಲಯ ಯೋಜನೆಗಳಡಿಯಲ್ಲಿ ಕೈಗೊಳ್ಳಲಾಗುತ್ತಿದೆ.

ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ **ಮಾನವ ಪ್ರಾಣಹಾನಿ** ಪ್ರಕರಣಗಳಿಗೆ ಪಾವತಿಸಲಾದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

| ವಿಭಾಗ | 2020-21 | | 2021-22 | |
|---|---|---|---|---|
| | ಪ್ರಕರಣ | ಪಾವತಿಸಿದ ಮೊತ್ತ | ಪ್ರಕರಣ | ಪಾವತಿಸಿದ ಮೊತ್ತ |
| ಬಿ.ಆರ್.ಟಿ. ಹುಲಿ ಸಂರಕ್ಷಿತ ಪ್ರದೇಶ | 1 | 7.50 | 1 | 7.50 |
| ಮಲೈ ಮಹದೇಶ್ವರ ವನ್ಯಜೀವಿ | 1 | 5.00 | 1 | 7.50 |
| ಕಾವೇರಿ ವನ್ಯಜೀವಿ | 1 | 7.50 | - | - |

ಚಾಮರಾಜನಗರ ಜಿಲ್ಲಾ ವ್ಯಾಪ್ತಿಗೆ ಬಿ.ಆರ್. ಟಿ. ಹುಲಿ ಸಂರಕ್ಷಿತ ಪ್ರದೇಶ, ಚಾಮರಾಜನಗರ , ಕಾವೇರಿ ವನ್ಯಜೀವಿ ವಿಭಾಗ, ಕೊಳ್ಳೇಗಾಲ, ಮಲೈ ಮಹದೇಶ್ವರ ವನ್ಯಜೀವಿ ವಿಭಾಗ, ಕೊಳ್ಳೇಗಾಲ ಒಳಪಡುತ್ತವೆ. ಸದರಿ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಂಚಿನಿಂದ ಗ್ರಾಮಗಳಿಗೆ ಪ್ರವೇಶಿಸದಂತೆ ತಡೆಗಟ್ಟಲು ವಿವಿಧ ಯೋಜನೆಗಳಡಿಯಲ್ಲಿ ಒದಗಿಸಲಾದ ಅನುದಾನದಿಂದ ಉಪಯೋಗಿತ ರೈಲು ಹಳಿಗಳಿಂದ ರೈಲ್ವೆ ಬ್ಯಾರಿಕೇಡ್ ನಿರ್ಮಾಣ, ಆನೆ ನಿರೋಧಕ ಕಂದಕ, ಸೋಲಾರ್ ತಂತಿ ಬೇಲಿ/ಟೆಂಟಕಲ್ ಫೆನ್ಸಿಂಗ್ ಕಾಮಗಾರಿಗಳನ್ನು ಕೈಗೊಂಡಿದ್ದು, ಇದರೊಂದಿಗೆ ಕಾಡಾನೆ ಹಾವಳಿ ಕಂಡಬಂದ ಸಂದರ್ಭದಲ್ಲಿ ಇಲಾಖಾ ಕ್ಷೇತ್ರ ಸಿಬ್ಬಂದಿಗಳೊಂದಿಗೆ ಕಳ್ಳಬೇಟೆ ತಡೆ ಶಿಬಿರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಹಾಗೂ ಕ್ಷಿಪ್ರ ಸ್ಪಂದನ ತಂಡಗಳು ಸಕಾರಾತ್ಮಕವಾಗಿ ಸ್ಪಂದಿಸಿ, ಕಾಡಾನೆಗಳನ್ನು ಅರಣ್ಯಕ್ಕೆ ಹಿಮ್ಮೆಟ್ಟಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಮಾನವ-ಆನೆ ಸಂಘರ್ಷ ಪರಿಣಾಮಕಾರಿಯಾಗಿ ತಡೆಗಟ್ಟಲು ಈ ಕೆಳಕಂಡ ಕಾಮಗಾರಿಗಳನ್ನು ಆಧ್ಯತೆ ನೆಲೆಯಲ್ಲಿ ಕೈಗೊಳ್ಳಲಾಗಿರುತ್ತದೆ.

| ಕ್ರ. ಸಂ. | ವರ್ಷ | ವಿಭಾಗ | ಕಾಮಗಾರಿ ವಿವರ (ಭೌತಿಕ ಕಿ.ಮೀ.ಗಳಲ್ಲಿ / ಆರ್ಥಿಕ ರೂ.ಲಕ್ಷಗಳಲ್ಲಿ) | | | | | |
|---|---|---|---|---|---|---|---|---|
| | | | ಆನೆ ತಡೆ ಕಂದಕ | | ಸೋಲಾರ್ / ಟೆಂಟಕಲ್ ತಂತಿಬೇಲಿ | | ರೈಲ್ವೆ ಬ್ಯಾರಿಕೇಡ್ | |
| | | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | 2020-21 | ಬಿ.ಆರ್.ಟಿ. ಹುಲಿಸಂರಕ್ಷಿತ ಪ್ರದೇಶ | 11.20 | 80.600 | 145.5 | 40.75 | - | - |
| 2 | | ಮಲೈಮಹದೇಶ್ವರ | 4.600 | 69.489 | 10.00 | 50.000 | -- | -- |

...3

| | | | | | | | |
|---|---|---|---|---|---|---|---|
| 3 | 2020-21 | ಕಾವೇರಿ ವನ್ಯಜೀವಿ | - | - | 9.00 | 44.79 | 18.38 | 2117.38 |
| 1 | 2021-22 | ಬಿ.ಆರ್.ಟಿ. ಹುಲಿಸಂರಕ್ಷಿತ ಪ್ರದೇಶ | 20.21 | 88.189 | 27.50 | 122.741 | - | 215.215 (ರೈಲ್ವೆ ಹಳಿ ಖರೀದಿ) |
| 2 | | ಮಲೈಮಹದೇಶ್ವರ | 3.00 | 28.933 | 16.64 | 91.428 | 8.76 | 899.966 |
| 3 | | ಕಾವೇರಿ ವನ್ಯಜೀವಿ | - | - | 82.00 | 235.00 | 2.49 | 440.00 |

ಮುಂದುವರೆದು, ವನ್ಯಪ್ರಾಣಿಗಳಿಗೆ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ, ಕೆರೆಗಳಲ್ಲಿ ಹೂಳೆತ್ತುವಿಕೆ ಹಾಗೂ ಪುನಃಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ.

ಮೇಲ್ಕಂಡ ಶಾಶ್ವತ ಕಾಮಗಾರಿಗಳೊಂದಿಗೆ ಲಭ್ಯ ಮಾನವ ಸಂಪನ್ಮೂಲಗಳನ್ನು ಉಪಯೋಗಿಸಿಕೊಂಡು ಕಾಡಾನೆ ಹಾವಳಿಯನ್ನು ತಡೆಗಟ್ಟಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

**ಇ-ಸಂಖ್ಯೆ: ಅಪಜೀ 206 ಎಫ್‌ಡಬ್ಲ್ಯೂಎಲ್ 2022**

**(ಬಸವರಾಜ ಬೊಮ್ಮಾಯಿ)**
**ಮುಖ್ಯಮಂತ್ರಿ**